**Bangalore**
**Regional News**
**09.10.2025 / 2.30 pm**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಸಚಿವ ಸಂಪುಟ ಪುನರ್‍ರಚನೆ ವಿಚಾರ; ಗೊಂದಲ ಸೃಷ್ಟಿಸದಂತೆ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮನವಿ

೨. ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ.ಆರ್.ಗವಾಯಿ ವಿರುದ್ಧ ಅನುಚಿತ ವರ್ತನೆ ; ಬೆಂಗಳೂರಿನಲ್ಲಿ ಶೂನ್ಯ ಮೊಕದ್ದಮೆ ದಾಖಲು

೩. ಶಾಸ್ತ್ರೋಕ್ತವಾಗಿ ತೆರೆದ ಹಾಸನಾಂಬೆ ದೇಗುಲದ ಗರ್ಭಗುಡಿ ಬಾಗಿಲು; ನಾಳೆಯಿಂದ ಭಕ್ತರಿಗೆ ದರ್ಶನ

೪. ೫೨೫ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ನೀರಿದ್ದರೆ ನಾಳೆ ಅಭಿಯಾನಕ್ಕೆ ಬೆಂಗಳೂರಿನಲ್ಲಿ ಇಂದು ಚಾಲನೆ

**************

ಸಚಿವ ಸಂಪುಟ ಪುನರ್ ರಚನೆ ಕುರಿತಂತೆ ಯಾವುದೇ ಮಾಹಿತಿ ಇಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಹೈಕಮಾಂಡ್ ಹಾಗೂ ಮುಖ್ಯಮಂತ್ರಿಗಳಿಗೆ ಬಿಟ್ಟ ವಿಚಾರ ಎಂದು ಪ್ರತಿಕ್ರಿಯಿಸಿದ್ದಾರೆ. ಈ ವಿಚಾರವಾಗಿ ಅನಗತ್ಯ ಚರ್ಚೆ ಮಾಡಿ ಗೊಂದಲ ಸೃಷ್ಟಿಸಬೇಡಿ ಎಂದು ಮನವಿ ಮಾಡಿದ್ದಾರೆ.

**************

ಸುಪ್ರೀಂಕೋರ್ಟ್ ಮುಖ್ಯ ನ್ಯಾಯಮೂರ್ತಿ ಬಿ. ಆರ್. ಗವಾಯಿ ವಿರುದ್ದ ಅನುಚಿತವಾಗಿ ವರ್ತಿಸಿದ ವಕೀಲ ರಾಕೇಶ್ ಕಿಶೋರ್ ವಿರುದ್ಧ ಬೆಂಗಳೂರಿನ ವಿಧಾನಸೌಧ ಪೋಲಿಸರು ಶೂನ್ಯ ಎಫ್.ಐ.ಆರ್. ದಾಖಲಿಸಿದ್ದಾರೆ. ಅಖಿಲ ಭಾರತ ವಕೀಲರ ಸಂಘದ ಅಧ್ಯಕ್ಷ ಭಕ್ತವಾಚಲ ದೂರು ದಾಖಲಿಸಿದ್ದು, ಪೊಲೀಸರು ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ ೧೩೨ -೧೩೩ರ ಅಡಿಯಲ್ಲಿ ಶೂನ್ಯ ಮೊಕದ್ದಮೆ ದಾಖಲಿಸಿದ್ದಾರೆ. ಅಪರಾಧ ನಡೆದ ಸ್ಥಳ ಅಥವಾ ಪೊಲೀಸ್ ಠಾಣೆಯ ವ್ಯಾಪ್ತಿಯನ್ನು ಪರಿಗಣಿಸದೆ ದಾಖಲಿಸಬಹುದಾದ ಮೊಕದ್ದಮೆಗೆ ಜೀರೋ ಎಫ್.ಐ.ಆರ್. ಎನ್ನಲಾಗುತ್ತಿದೆ. ಪ್ರಕರಣವನ್ನು ನವದೆಹಲಿಯ ಪೊಲೀಸರಿಗೆ ವರ್ಗಾಯಿಸಲು ಪೊಲೀಸರು ನಿರ್ಧರಿಸಿದ್ದಾರೆ.

**************

ಹಾಸನದ ಪುರಾಣ ಪ್ರಸಿದ್ಧ ಹಾಸನಾಂಬ ದೇಗುಲದ ಗರ್ಭಗುಡಿ ಬಾಗಿಲನ್ನು ಇಂದು ಶಾಸ್ತ್ರೋಕ್ತ ವಿಧಿವಿಧಾನಗಳೊಂದಿಗೆ ತೆರೆಯಲಾಗಿದೆ. ಮಧ್ಯಾಹ್ನ ೧೨.೧೦ ಕ್ಕೆ ಅರಸು ವಂಶಸ್ಥ ನಂಜ ರಾಜೇ ಅರಸ್ ಅವರು ಬಾಳೆಗೊನೆ ಕಡಿದ ಬಳಿಕ ಬಾಗಿಲನ್ನು ತೆರೆಯಲಾಯಿತು. ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೃಷ್ಣ ಭೈರೇಗೌಡ, ತುಮಕೂರಿನ ಸಿದ್ದಲಿಂಗಾಶ್ರೀ ಹಾಗೂ ಆದಿಚುಂಚನಗಿರಿ ನಿರ್ಮಲಾನಂದನಾಥ ಶ್ರೀಗಳಸಮ್ಮುಖದಲ್ಲಿ ಗರ್ಭಗುಡಿಯ ಬಾಗಿಲು ತೆರೆಯಲಾಗಿದೆ. ವರ್ಷಕ್ಕೊಮ್ಮೆ ಮಾತ್ರ ಹಾಸನಾಂಬ ದೇವಿ ದರ್ಶನಕ್ಕೆ ಅವಕಾಶವಿದೆ. ಇಂದು ದೇವಿಗೆ ಆಭರಣ ಹಾಗೂ ಪುಷ್ಪಾಲಂಕಾರ ಮಾಡಲಾಗುತ್ತಿದೆ. ನಾಳೆಯಿಂದ ಸಾರ್ವಜನಿಕರು ಇದೇ ೨೩ರವರೆಗೆ ಭಕ್ತರು ದೇವಿಯ ದರ್ಶನ ಪಡೆಯಬಹುದು. ೧ ಸಾವಿರ ಹಾಗೂ ೩೦೦ ರೂಪಾಯಿ ದರದ ವಿಶೇಷ ದರ್ಶನದ ಟಿಕೆಟ್ ಲಭ್ಯವಿದ್ದು ಭಕ್ತರು ಆನ್ ಲೈನ್ ನಲ್ಲಿ ಟಿಕೆಟ್ ಪಡೆಯಬಹುದು.

**************

ಅಂತರ್ಜಲ ಮಟ್ಟ ತೀವ್ರವಾಗಿ ಕುಸಿದಿರುವ ರಾಜ್ಯದ ೫೨೫ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿ ಜಲ ಮರುಪೂರಣದ ಜನಜಾಗೃತಿಗೆ ನೀರಿದ್ದರೆ ನಾಳೆ ಎಂಬ ಅಭಿಯಾನ ಕೈಗೆತ್ತಿಗೊಳ್ಳಲಾಗಿದೆ. ಸಣ್ಣ ನೀರಾವರಿ ಇಲಾಖೆಯ ಈ ಅಭಿಯಾನಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಚಾಲನೆ ನೀಡಲಿದ್ದಾರೆ. ಚಿತ್ರನಟ ವಸಿಷ್ಠ ಸಿಂಹ ಅವರನ್ನು ಜಾಗೃತಿ ಅಭಿಯಾನದ ರಾಯಭಾರಿಯಾಗಿ ಆಯ್ಕೆ ಮಾಡಲಾಗಿದೆ. ಅಂತರ್ಜಲ ಮಟ್ಟ ಸುಧಾರಣೆಯೇ ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

**************

ಭಾರತ ಸರ್ಕಾರದ ಅಂಕಿ ಅಂಶ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ವತಿಯಿಂದ ಬೆಂಗಳೂರಿನ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್ ಕ್ಯಾಂಪಸ್‌ನಲ್ಲಿ "ಎನ್‌ಎಸ್‌ಎಸ್ ಸಮೀಕ್ಷೆಗಳು ಸಾರ್ವಜನಿಕ ನೀತಿಯ ಮೇಲೆ ಹೇಗೆ ಪ್ರಭಾವ ಬೀರಿವೆ" ಎಂಬ ವಿಷಯದ ಕುರಿತು ರಾಷ್ಟ್ರೀಯ ವಿಚಾರ ಸಂಕಿರಣ ನಡೆಯಿತು. ಅಂಕಿಅಂಶ & ಕಾರ್ಯಕ್ರಮ ಅನುಷ್ಠಾನ ಸಚಿವಾಲಯದ ಕಾರ್ಯದರ್ಶಿ ಡಾ.ಸೌರಭ್ ಗಾರ್ಗ್, ಕಾರ್ಯಕ್ರಮ ಉದ್ಘಾಟಿಸಿದರು. ಸಾಮಾಜಿಕ ಮತ್ತು ಆರ್ಥಿಕ ಬದಲಾವಣೆ ಸಂಸ್ಥೆ ಅಧ್ಯಕ್ಷರಾದ ಡಾ. ಅಶೋಕ್ ದಳವಾಯಿ ಮಾತನಾಡಿ, ಪ್ರತಿಯೊಬ್ಬ ನಾಗರಿಕ ಸೇವಕರು ಡೇಟಾ ಚಾಲಿತ ಸ್ಥಿತಿಯತ್ತ ಗಮನಹರಿಸಬೇಕು ಎಂದು ಹೇಳಿದ್ದಾರೆ. ಡೇಟಾ ಎಂದರೆ ಕೇವಲ ಸಂಖ್ಯೆಗಳಲ್ಲ, ಇದು ಶಕ್ತಿಶಾಲಿ ಸಾಧನವಾಗಿ ಕಾರ್ಯ

ನಿರ್ವಹಿಸಲಿದೆ.  ಡೇಟಾಗಳು ಹಿಂದಿನ, ಪ್ರಸ್ತುತ ಹಾಗೂ ಭವಿಷ್ಯವನ್ನು ಅರ್ಥ ಮಾಡಿಕೊಳ್ಳಲು ಪ್ರಬಲ ಸಾಧನವಾಗಿ ಕಾರ್ಯ ನಿರ್ವಹಿಸಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ: ಡಾ. ಅಶೋಕ್ ದಳವಾಯಿ, ( 27 ಸೆಕೆಂಡುಗಳು)

ಮಾದರಿ ಸಮೀಕ್ಷೆಗಾಗಿ ೮ ಸಾವಿರಕ್ಕೂ ಹೆಚ್ಚು ಜನರನ್ನು ಹಾಗೂ ಈ ಡೇಟಾ ಅಂತರವನ್ನು ತುಂಬಲು ೪ ಲಕ್ಷ ವ್ಯಕ್ತಿಗಳು ಮತ್ತು ೨.೫ ಲಕ್ಷ ಮನೆಗಳ ಡೇಟಾ ಸಂಗ್ರಹಣೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

**************

ಮಡಿಕೇರಿ ಬಳಿಯ ಖಾಸಗಿ  ವಸತಿ ಶಾಲೆಯಲ್ಲಿ ಸಂಭವಿಸಿದ ವಿದ್ಯುತ್ ಆಕಸ್ಮಿಕ ದುರಂತದಲ್ಲಿ ವಿದ್ಯಾರ್ಥಿಯೋರ್ವ ಸಾವನ್ನಪ್ಪಿದ್ದಾನೆ. ಕಾಟಗೇರಿ ಗ್ರಾಮದಲ್ಲಿನ ಖಾಸಗಿ ವಸತಿ ಶಾಲೆಯಲ್ಲಿ ಇಂದು ಮುಂಜಾನೆ ವಿದ್ಯುತ್ ಅವಘಡ ಸಂಭವಿಸಿದೆ ಹೊರಬರಲಾಗದೇ ಕೊಠಡಿಯಲ್ಲಿಯೇ  ಉಸಿರುಗಟ್ಟಿ ಸಾವನ್ನಪ್ಪಿದ್ದಾನೆ. ಉಳಿದ ವಿದ್ಯಾರ್ಥಿಗಳು ಹೊರಬಂದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಘಟನಾ ಸ್ಥಳಕ್ಕೆ ತಹಶೀಲ್ದಾರ್ ಶ್ರೀಧರ್, ಪೊಲೀಸ್ ಅಧಿಕಾರಿಗಳು ಭೇಟಿ ನೀಡಿದ್ದು ಪರಿಶೀಲನೆ ನಡೆಸಿದ್ದಾರೆ.

**************

ವಿಜ್ಞಾನ ಮತ್ತು ತಂತ್ರಜ್ಞಾನ  ಕ್ಷೇತ್ರದಲ್ಲಿ ಭಾರತ ಅಪಾರ ಸಾಧನೆ ಮಾಡುತ್ತಿರುವುದು ಹೆಮ್ಮೆಯ ವಿಚಾರವಾಗಿದೆ ಎಂದು ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ  ಕರ್ನಾಟಕ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್  ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಹಯೋಗದಲ್ಲಿ ನಡೆದ ಪ್ರಥಮ ಟೆಲಿಸ್ಕೋಪ್ ತರಬೇತಿ ಪ್ರಮಾಣ ಪತ್ರ ವಿತರಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳೇ ಸ್ವತಃ ಟೆಲಿಸ್ಕೋಪ್ ತಯಾರಿಸಿ, ವಿಶ್ವದಾಖಲೆಯನ್ನು ನಿರ್ಮಿಸಿರುವುದು ಅಭಿನಂದನೀಯ ಎಂದು ಹೇಳಿದ್ದಾರೆ.

ಧ್ವನಿ : ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್( 24 ಸೆಕೆಂಡುಗಳು)

ನಿವೃತ್ತ ನ್ಯಾಯಮೂರ್ತಿ ನಾಗಮೋಹನ ದಾಸ್ ಮಾತನಾಡಿ ವಿಜ್ಞಾನದ ಜೊತೆಗೆ ವೈಜ್ಞಾನಿಕ ಚಿಂತನೆ ಮೂಡಿದಾಗ ಮಾತ್ರ ಮೌಢ್ಯಗಳಿಂದ ಹೊರಬಂದ ಉತ್ತಮ ಸಮಾಜ ನಿರ್ಮಾಣ ಮಾಡಬಹುದಾಗಿದೆ ಎಂದು ಅಭಿಪ್ರಾಯ ಪಟ್ಟಿದ್ದಾರೆ.

**************

ಮಹಿಳೆಯರಿಗೆ ರಾಜ್ಯ ಸರ್ಕಾರ ಸಿಹಿಸುದ್ದಿ ನೀಡಿದೆ. ಮುಟ್ಟಿನ ಸಂದರ್ಭದಲ್ಲಿ ಒಂದು ದಿನ ವೇತನ ಸಹಿತ ರಜೆ ನೀಡಲು ರಾಜ್ಯ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ ಎಂದು ಸಚಿವ ಹೆಚ್.ಕೆ.ಪಾಟೀಲ್ ಮಾಹಿತಿ ನೀಡಿದ್ದಾರೆ. ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಸರ್ಕಾರಿ ಕಚೇರಿಗಳು, ಗಾರ್ಮೆಂಟ್ಸ್, ಬಹುರಾಷ್ಟ್ರೀಯ ಕಂಪನಿಗಳು, ಐಟಿ ಖಾಸಗಿ ಕೈಗಾರಿಕಾ ವಲಯಗಳಲ್ಲಿ ಮುಟ್ಟಿನ ರಜೆ ಅನ್ವಯವಾಗಲಿದೆ ಎಂದು ಹೇಳಿದ್ದಾರೆ.

**************

ಬಾರ್ಬೋಡೋಸ್ ರಾಜಧಾನಿ ಬ್ರಿಡ್ಜ್‌ಟೌನ್ ನಗರದಲ್ಲಿ ನಡೆಯುತ್ತಿರುವ "೬೮ನೇ ಕಾಮನ್‌ವೆಲ್ತ್ ಸಂಸದೀಯ ಸಮಾವೇಶದಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ, ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್, ಸಭಾಪತಿ ಬಸವರಾಜ ಹೊರಟ್ಟಿ, ಮತ್ತಿತರರು ಪಾಲ್ಗೊಂಡಿದ್ದಾರೆ. ಈ ಸಮಾವೇಶದಲ್ಲಿ ಜಗತ್ತಿನ ವಿವಿಧ ದೇಶಗಳ ಪ್ರತಿನಿಧಿಗಳು, ಲೋಕಸಭಾಧ್ಯಕ್ಷರು, ರಾಜ್ಯಸಭೆಯ ಉಪ ಸಭಾಪತಿಗಳು, ವಿವಿಧ ರಾಜ್ಯಗಳ ವಿಧಾನ ಸಭೆ ಅಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸಭಾಪತಿಗಳು, ಸಚಿವರುಗಳು, ರಾಜಕೀಯ ತಜ್ಞರು, ನೀತಿ ನಿರೂಪಕರು, ರಾಜಕೀಯ ಮುತ್ಸದ್ದಿಗಳು ಸೇರಿದಂತೆ ವಿವಿಧ ಗಣ್ಯರು ಭಾಗವಹಿಸಿದ್ದಾರೆ.

**************

೯೦ ದಿನಗಳ ರಾಷ್ಟ್ರಕ್ಕಾಗಿ ವಿಶೇಷ ಮಧ್ಯಸ್ಥಿಕೆ ಅಭಿಯಾನದ ಭಾಗವಾಗಿ ೧೦೨ ಪ್ರಕರಣಗಳನ್ನು ಇತ್ಯರ್ಥ ಮಾಡಲಾಗಿದೆ ಎಂದು ಯಾದಗಿರಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮರಿಯಪ್ಪ ತಿಳಿಸಿದ್ದಾರೆ. ಜುಲೈ ೧ರಿಂದ ಆಕ್ಟೋಬರ್ ೬ರ ವರೆಗೆ  ೯೦ ದಿನಗಳ ರಾಷ್ಟ್ರಕ್ಕಾಗಿ ವಿಶೇಷ ಮಧ್ಯಸ್ಥಿಕೆ ಅಭಿಯಾನ ನಡೆಸಲಾಗಿದೆ. ಜಿಲ್ಲೆಯ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆಗೆ ಬಾಕಿ ಇದ್ದ ಸುಮಾರು ೧೧ ಸಾವಿರದ ೨೫೦ ಪ್ರಕರಣಗಳ ಪೈಕಿ ೧ ಸಾವಿರದ ೮೮೭ ಪ್ರಕರಣಗಳನ್ನು ರಾಜಿ ಮಾಡಬಹುದಾದ ಪ್ರಕರಣಗಳಾಗಿ ಗುರುತಿಸಲಾಗಿತ್ತು ಎಂದು ಹೇಳಿದ್ದಾರೆ.

**************

ಇನ್ನೂ ಒಂದು ವಾರದಲ್ಲಿ ಅತಿವೃಷ್ಟಿಯಿಂದ ಹಾನಿಯಾದ ಸಮೀಕ್ಷೆ ಪೂರ್ಣಗೊಳಿಸಲಾಗುವುದು ಎಂದು ಯಾದಗಿರಿ ಜಿಲ್ಲಾಧಿಕಾರಿ ಹರ್ಷಲ್ ಬೋಯರ್ ತಿಳಿಸಿದ್ದಾರೆ. ಜಿಲ್ಲೆಯ ಹುಣಸಗಿ ತಾಲ್ಲೂಕಿನ ಕೊಡೇಕಲ್ಲ ಹಾಗೂ ರಾಜನಕೋಳೂರು ಪ್ರದೇಶದಲ್ಲಿ ಬೆಳೆಹಾನಿಯಾದ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಪರಿಶೀಲಿಸಿ ನಂತರ ಮಾತನಾಡಿದ ಅವರು, ಹುಣಸಗಿ ತಾಲ್ಲೂಕಿನಲ್ಲಿ ಸುಮಾರು

೨೦ ಸಾವಿರಕ್ಕಿಂತಲೂ ಹೆಚ್ಚು ಹೆಕ್ಟೇರ್ ಪ್ರದೇಶದ ಬೆಳೆಹಾನಿಯಾಗಿದೆ. ಹತ್ತಿ, ತೊಗರಿ ಸಾಕಷ್ಟು ಹಾನಿಯಾಗಿದೆ.

**************

ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ನಗರವನ್ನು ಸ್ವಚ್ಛವಾಗಿಟ್ಟುಕೊಳ್ಳುವ ಉದ್ದೇಶದಿಂದ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮ ಇದೇ ೧೧ರಂದು ರಾತ್ರಿ ೧೦-೩೦ರಿಂದ ಮಧ್ಯರಾತ್ರಿ ೧ ಗಂಟೆಯವರೆಗೆ ಆಯೋಜಿಸಲಾಗಿದೆ.

**************